# ಕರ್ನಾಟಕ ಸರ್ಕಾರ

## ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.

ಸಂಖ್ಯೆ: ವೈ2(ಇ.ಪ.) ಬಾ.ಪ.ಬ./11/2021-22, ದಿನಾಂಕ: 30/06/2021

### ಸುತ್ತೋಲೆ

**ವಿಷಯ:** ಕೋವಿಡ್-19 ವೈರಸ್ ಸೋಂಕಿನ ಹಿನ್ನಲೆಯಲ್ಲಿ ಇತರೆ ಪರೀಕ್ಷೆಗಳ ವಿಭಾಗದಿಂದ ನಡೆಸುವ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಪ್ರಮಾಣಿತ ಕಾರ್ಯಾಚರಣಾ ವಿಧಾನ (ಎಸ್.ಓ.ಪಿ) Standard Operating Procedure).

*****

2020-21 ನೇ ಸಾಲಿನಲ್ಲಿ ಇತರೆ ಪರೀಕ್ಷೆಗಳ ವಿಭಾಗದಿಂದ ದಿನಾಂಕ: 12/07/2021 ರಿಂದ ಪ್ರಾರಂಭವಾಗಲಿರುವ ಪರೀಕ್ಷೆಗಳನ್ನು ನಡೆಸಲು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ಇತರೆ ಪರೀಕ್ಷೆಗಳು) ಬೆಂಗಳೂರು, ವತಿಯಿಂದ ಎಲ್ಲಾ ಪೂರ್ವಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಕೋವಿಡ್-19 ವೈರಸ್ ಸೋಂಕಿನ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಹಾಗೂ ಪರೀಕ್ಷಾ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವ ಎಲ್ಲರ ಸ್ವಾಸ್ತ್ಯದ ಹಿತದೃಷ್ಟಿಯಿಂದ ಇತರೆ ಪರೀಕ್ಷೆಗಳ ವಿಭಾಗದಿಂದ ಪರೀಕ್ಷೆಗೆ ಸಂಬಂಧಿಸಿದಂತೆ ಪ್ರಮಾಣಿತ ಕಾರ್ಯಾಚರಣಾ ವಿಧಾನ (ಎಸ್.ಓ.ಪಿ) ಸಿದ್ದಪಡಿಸಿ ಈ ಕೆಳಕಂಡ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಪರೀಕ್ಷೆಯನ್ನು ಸುವ್ಯವಸ್ಥಿತವಾಗಿ ನಡೆಸಲು ಸಂಬಂಧಪಟ್ಟವರಿಗೆ ಸೂಚಿಸಿದೆ.

<u>ಪರೀಕ್ಷಾ ಕೇಂದ್ರ:-</u>

1. ಯಾವುದೇ ಪರೀಕ್ಷಾ ಕೇಂದ್ರವನ್ನು ಕೋವಿಡ್-19 ಲಸಿಕಾ ಕೇಂದ್ರಗಳಾಗಿ ಬಳಸಲು ಅವಕಾಶ ನೀಡಬಾರದು.
2. ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುವ ಸಂದರ್ಭದಲ್ಲಿ ಪರೀಕ್ಷಾ ಕೊಠಡಿ ಹಾಗೂ ಕೇಂದ್ರದ ಆವರಣಕ್ಕೆ ಪ್ರವೇಶಿಸುವ ಸಂದರ್ಭದಲ್ಲಿ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳಲು ಸೂಕ್ತ ಕಾಳಜಿ ವಹಿಸುವುದು.
3. ಕೋವಿಡ್-19 ವೈರಸ್ ಸೋಂಕು ತಡೆಗಟ್ಟುವ ಹಿನ್ನಲೆಯಲ್ಲಿ, ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಸಂಖ್ಯೆ ಒಂದು ಪರೀಕ್ಷಾ ಕೊಠಡಿಯಲ್ಲಿ ಗರಿಷ್ಠ 12 ಅಭ್ಯರ್ಥಿಗಳು ಮೀರದಂತೆ ಪ್ರತಿ ಪರೀಕ್ಷಾ ಕೊಠಡಿಗಳಲ್ಲಿ ಕನಿಷ್ಠ 6 ಅಡಿ ದೈಹಿಕ ಅಂತರವನ್ನು ಕಾಯ್ದುಕೊಳ್ಳುವಂತೆ ಆಸನ ವ್ಯವಸ್ಥೆ ಮಾಡುವುದು.
4. ಪರೀಕ್ಷಾ ಕೇಂದ್ರದಲ್ಲಿ ಅಭ್ಯರ್ಥಿಗಳ ಆಸನ ವ್ಯವಸ್ಥೆಯ ಬಗ್ಗೆ ಅಂದರೆ ಯಾವ ಅಭ್ಯರ್ಥಿ ಯಾವ ಕೊಠಡಿಯಲ್ಲಿ ಪರೀಕ್ಷೆ ಬರೆಯುತ್ತಾನೆ ಎಂಬುದನ್ನು ಮುಂಚಿತವಾಗಿ ಅಭ್ಯರ್ಥಿಗಳಿಗೆ ತಿಳಿಸುವ ವ್ಯವಸ್ಥೆ ಮಾಡುವುದು. ಈ ರೀತಿ ಮಾಡುವುದರಿಂದ ಅಭ್ಯರ್ಥಿಗಳು ಸೂಚನಾ ಫಲಕದ ಮುಂದೆ ಗುಂಪುಗೂಡುವುದನ್ನು ತಡೆಗಟ್ಟಬಹುದು.
5. ಪ್ರತಿ ಅಭ್ಯರ್ಥಿಯು ತಮ್ಮದೇ ಆದ ನೀರಿನ ಬಾಟಲ್‌ಗಳನ್ನು ತರುವಂತೆ ಮಾಡುವುದನ್ನು ಕಡ್ಡಾಯಗೊಳಿಸಲಾಗಿದೆ.
6. ಮಲೆನಾಡು ಪ್ರದೇಶದ ಜಿಲ್ಲೆಗಳಲ್ಲಿನ ಪರೀಕ್ಷಾ ಕೇಂದ್ರಗಳಲ್ಲಿ ಕೊಠಡಿಯೊಳಗೆ ಮಳೆಯ ನೀರು ಎರಚುವಿಕೆಯಿಂದ ತೊಂದರೆ ಉಂಟಾಗುತ್ತಿದೆಯೆಂದು ಭಾವಿಸಿದಲ್ಲಿ ಅಭ್ಯರ್ಥಿಗಳ ಸಂಖ್ಯೆಯನ್ನು ಬೆಂಚಿಗೊಂದರಂತೆ ನಿರ್ದಿಷ್ಟಪಡಿಸಿಕೊಂಡು ಪರೀಕ್ಷಾ ಕೇಂದ್ರಗಳ ಕೊಠಡಿ ಲಭ್ಯತೆಗನುಸಾರವಾಗಿ ಕೊಠಡಿಗಳ ಸಂಖ್ಯೆಯನ್ನು ಹೆಚ್ಚಿಸಿಕೊಳ್ಳುವುದು. ಇದಕ್ಕೆ ಅನುಗುಣವಾಗಿ ಕೊಠಡಿ ಮೇಲ್ವಿಚಾರಕರನ್ನು ನೇಮಿಸಿಕೊಳ್ಳುವುದು.
7. ಒಂದು ವೇಳೆ ಪರೀಕ್ಷಾ ಕೇಂದ್ರಗಳಲ್ಲಿ ದೈಹಿಕ ಅಂತರವನ್ನು ಕಾಯ್ದುಕೊಳ್ಳಲು ಕೊಠಡಿಗಳ ಕೊರತೆ ಕಂಡು ಬಂದಲ್ಲಿ ಅದೇ ಪರೀಕ್ಷಾ ಕೇಂದ್ರದಲ್ಲಿನ ಆವರಣ ಅಥವಾ ಪರೀಕ್ಷಾ ಕೇಂದ್ರದ ಪಕ್ಕದಲ್ಲಿರುವ ಪ್ರಾಥಮಿಕ ಶಾಲೆ, ಪ್ರೌಢಶಾಲೆ, ಪದವಿ

ಪೂರ್ವ ಕಾಲೇಜು (100 ಮೀಟರ್ ಅಂತರ ವ್ಯಾಪ್ತಿಯ) ಅಥವಾ ಯಾವುದೇ ಶಿಕ್ಷಣ ಸಂಸ್ಥೆಯಲ್ಲಿನ ಕೊಠಡಿಗಳನ್ನು ಹೆಚ್ಚುವರಿ ಪರೀಕ್ಷಾ ಕೊಠಡಿಗಳನ್ನಾಗಿ ಉಪಯೋಗಿಸಿಕೊಂಡು ಅಭ್ಯರ್ಥಿಗಳಿಗೆ ಆಸನದ ವ್ಯವಸ್ಥೆ ಮಾಡುವುದು.

8. ಪ್ರತಿ ಪರೀಕ್ಷಾ ಕೇಂದ್ರದಲ್ಲೂ ಎರಡು (02) ಹೆಚ್ಚುವರಿ ಕೊಠಡಿಗಳನ್ನು ವಿಶೇಷ ಕೊಠಡಿಗಳನ್ನಾಗಿ ಗುರುತಿಸಿ ಕಾಯ್ದಿರಿಸಿಕೊಳ್ಳುವುದು. ಕೆಮ್ಮು, ನೆಗಡಿ, ಜ್ವರ ಮೊದಲಾದವುಗಳಿಂದ ಬಳಲುತ್ತಿರುವ ಅಭ್ಯರ್ಥಿಗಳಿಗೆ ಈ ವಿಶೇಷ ಕೊಠಡಿಯಲ್ಲಿ ಪರೀಕ್ಷೆ ಬರೆಯಲು ಅನುವು ಮಾಡಿಕೊಡುವುದು.

9. ವಿಶೇಷ ಕೊಠಡಿಗಳನ್ನು ಆ ದಿನದ ಪರೀಕ್ಷೆ ಮುಗಿದ ನಂತರ ಸೋಂಕು ನಿವಾರಕ ದ್ರಾವಕಗಳಿಂದ ಸ್ವಚ್ಛಗೊಳಿಸುವುದು. (Chemical Disinfectants).

10. ತುರ್ತು ಸಂದರ್ಭದಲ್ಲಿ ಪರೀಕ್ಷಾ ಕೇಂದ್ರಗಳನ್ನು ಬದಲಾಯಿಸಬೇಕಾದ ಅನಿವಾರ್ಯತೆ ಉಂಟಾದಲ್ಲಿ ಕ್ರಮವಹಿಸುವ ಬಗ್ಗೆ ಪರ್ಯಾಯವಾಗಿ ಎರಡು (02) ಹೆಚ್ಚುವರಿ ಪರೀಕ್ಷಾ ಕೇಂದ್ರಗಳನ್ನು ಜಿಲ್ಲಾ/ತಾಲ್ಲೂಕು ಕೇಂದ್ರದಲ್ಲಿ ಗುರುತಿಸಿ, ಅಗತ್ಯ ವ್ಯವಸ್ಥೆ ಮಾಡಿಕೊಂಡು ಕಾಯ್ದಿರಿಸಿಕೊಳ್ಳುವುದು.

11. ಪರೀಕ್ಷಾ ಕೇಂದ್ರಗಳು ಸ್ವಚ್ಛವಾಗಿರುವಂತೆ ಶೌಚಾಲಯಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ಕೈತೊಳೆಯಲು ನೀರು ಹಾಗೂ ಲಿಕ್ವಿಡ್ ಸೋಪು ಲಭ್ಯವಿರುವಂತೆ ಮುಖ್ಯ ಅಧೀಕ್ಷಕರು ಕ್ರಮವಹಿಸುವುದು.

12. ಅಭ್ಯರ್ಥಿಗಳು ಕೇಂದ್ರದ ಆವರಣ ಮತ್ತು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸುವಾಗ ದೈಹಿಕ ಅಂತರವನ್ನು ಕಾಪಾಡಲು ಆರು ಅಡಿ ಅಂತರದಲ್ಲಿ ಚೌಕಟ್ಟನ್ನು ಗುರುತು ಮಾಡಿ ಪ್ರತಿ ಅಭ್ಯರ್ಥಿಗಳು ಅದರ ಮೂಲಕವೇ ಸರತಿಯಲ್ಲಿ ಆರೋಗ್ಯ ತಪಾಸಣಾ ಕೌಂಟರ್ ಬಳಿ ತಪಾಸಣೆಗೊಳಪಡಬೇಕು.

13. ಪರೀಕ್ಷೆಯು ಪ್ರಾರಂಭವಾಗುವ ಒಂದು ಗಂಟೆ ಮುಂಚಿತವಾಗಿ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಗಳಲ್ಲಿ ಹಾಜರಿರುವುದು ಕಡ್ಡಾಯ ಎಂಬ ವಿಷಯವನ್ನು ವ್ಯಾಪಕವಾಗಿ ಪ್ರಚಾರಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವುದು. ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ಹಾಜರಾಗುವಾಗ ಗುಂಪು ಸೇರದಂತೆ ಸಾಮಾಜಿಕ ಅಂತರ ಕಾಯ್ದುಕೊಳ್ಳುವಂತೆ ಗಮನ ಹರಿಸುವುದು.

14. ಕೇಂದ್ರದ ಸುತ್ತಲೂ 200ಮೀ. ನಿಷೇಧಾಜ್ಞೆ ಜಾರಿಯಲ್ಲಿರುವುದನ್ನು ಅಭ್ಯರ್ಥಿ/ಪೋಷಕರಿಗೆ ಮನವರಿಕೆ ಮಾಡಿಸಿ, ಅಭ್ಯರ್ಥಿಗಳು ಗುಂಪಾಗಿ ಶಾಲೆಯ ಆವರಣವನ್ನು ಪ್ರವೇಶಿಸದಂತೆ ಕ್ರಮವಹಿಸುವುದು.

15. ಪರೀಕ್ಷಾ ಕೇಂದ್ರದ ಆವರಣದೊಳಗೆ ಪರೀಕ್ಷಾರ್ಥಿಗಳನ್ನು ಹೊರತುಪಡಿಸಿ ಯಾವುದೇ ಪೋಷಕರು/ಸಾರ್ವಜನಿಕರಿಗೆ ಕಡ್ಡಾಯವಾಗಿ ಪ್ರವೇಶ ನಿಷೇಧಿಸುವುದು.

16. ಪರೀಕ್ಷಾ ಕೇಂದ್ರಗಳಿಗೆ ಹಾಜರಾದ ಅಭ್ಯರ್ಥಿಗಳು ಕಡ್ಡಾಯವಾಗಿ ಥರ್ಮಲ್ ಸ್ಕ್ಯಾನಿಂಗ್‌ಗೆ ಒಳಪಡುವುದು, ಕೈಗಳನ್ನು ಸ್ಯಾನಿಟೈಸರ್‌ನಿಂದ ಶುಚಿಗೊಳಿಸುವುದು ಹಾಗೂ ಮಾಸ್ಕ್ ಧರಿಸುವುದನ್ನು ಕಡ್ಡಾಯಗೊಳಿಸಿದ್ದು, ಡಯಟ್ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರು (ಅಭಿವೃದ್ಧಿ) ಕಡ್ಡಾಯವಾಗಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರುಗಳ ಸಭೆ ಕರೆದು ಈ ಬಗ್ಗೆ ಅಗತ್ಯ ಸೂಚನೆ ನೀಡುವುದು.

17. ಪ್ರತಿ ಅಭ್ಯರ್ಥಿಗಳು ಕಡ್ಡಾಯವಾಗಿ ಮಾಸ್ಕ್‌ನ್ನು ಧರಿಸಿ ಪರೀಕ್ಷಾ ಕೇಂದ್ರಕ್ಕೆ ಹಾಜರಾಗುವುದು. ಮಾಸ್ಕ್ ಧರಿಸದ ಅಭ್ಯರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕಡ್ಡಾಯವಾಗಿ ಅವಕಾಶವಿರುವುದಿಲ್ಲ.

18. ಥರ್ಮಲ್ ಸ್ಕ್ಯಾನಿಂಗ್ ಸಮಯದಲ್ಲಿ ಯಾವುದಾದರೂ ವಿದ್ಯಾರ್ಥಿಗೆ ಶೀತ, ಕೆಮ್ಮು ಮತ್ತು ಹೆಚ್ಚಿನ ತಾಪ ಕಂಡುಬಂದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಈಗಾಗಲೇ ಹೆಚ್ಚುವರಿಯಾಗಿ ಕಾಯ್ದಿರಿಸಿರುವ ಕೊಠಡಿಯಲ್ಲಿ ಆಸನದ ವ್ಯವಸ್ಥೆ ಮಾಡಿ, ಪರೀಕ್ಷೆ

ಬರೆಯಲು ಅವಕಾಶ ಮಾಡಿಕೊಡುವುದು ಹಾಗೂ ಪರೀಕ್ಷಾ ನಂತರ ವೈದ್ಯಕೀಯ ತಪಾಸಣೆ ಮತ್ತು ಚಿಕಿತ್ಸೆಗೆ ತೆರಳುವಂತೆ ಸೂಚಿಸುವುದು.

19. ಪರೀಕ್ಷೆ ಪ್ರಾರಂಭವಾಗುವ ಎರಡು ದಿನಗಳ ಮುಂಚಿತವಾಗಿ ಪರೀಕ್ಷಾ ಕೇಂದ್ರಗಳಾಗಿ ಗುರುತಿಸಿರುವ ಶಾಲೆಗಳನ್ನು ಸ್ವಚ್ಛಗೊಳಿಸಿ, ಸೋಂಕು ನಿವಾರಕ ಔಷಧಿ ಸಿಂಪಡಣೆ ಮಾಡಿಸಿ, ವೈರಸ್ ಸೋಂಕು ಹರಡದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಸಂಬಂಧಪಟ್ಟ ಜಿಲ್ಲಾ ಆರೋಗ್ಯಾಧಿಕಾರಿಗಳನ್ನು ಭೇಟಿ ಮಾಡಿ ಅಗತ್ಯ ಕ್ರಮ ಕೈಗೊಳ್ಳುವಂತೆ ಕ್ರಮವಹಿಸುವುದು. ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಸ್ಥಳೀಯ ಆರೋಗ್ಯ ಇಲಾಖೆಯ ನರ್ಸ್/ಪ್ಯಾರಾ ಮೆಡಿಕಲ್ ಸಿಬ್ಬಂದಿಯವರು ಅಭ್ಯರ್ಥಿಗಳ ಆರೋಗ್ಯದ ಬಗ್ಗೆ ಕಾಳಜಿ ವಹಿಸಲು ಅನುಕೂಲವಾಗುವಂತೆ ಥರ್ಮಲ್‌ಸ್ಕ್ಯಾನರ್, ಪಲ್ಸ್ ಆಕ್ಸಿಮೀಟರ್ ಹಾಗೂ ಪ್ರಥಮ ಚಿಕಿತ್ಸಾ ಪೆಟ್ಟಿಗೆಯೊಂದಿಗೆ ಪರೀಕ್ಷಾ ದಿನಗಳಲ್ಲಿ ಹಾಜರಿರುವಂತೆ ಜಿಲ್ಲಾ ಆರೋಗ್ಯಾಧಿಕಾರಿಗಳನ್ನು ಸಂಪರ್ಕಿಸಿ ಸೂಕ್ತ ವ್ಯವಸ್ಥೆ ಮಾಡಿಕೊಳ್ಳುವುದು.

20. ಪ್ರತಿ ಅಭ್ಯರ್ಥಿಯು ಪರೀಕ್ಷಾ ಕೊಠಡಿಗೆ ಪ್ರವೇಶಿಸುವ ಮುನ್ನ ಕೈಗಳನ್ನು ಸ್ಯಾನಿಟೈಸ್ ಮಾಡಿಕೊಳ್ಳಲು ಪ್ರತಿ ಪರೀಕ್ಷಾ ಕೊಠಡಿಗೂ ಸ್ಯಾನಿಟೈಸರ್ ವ್ಯವಸ್ಥೆ ಮಾಡುವಂತೆ ಮುಖ್ಯ ಅಧೀಕ್ಷಕರು ಕ್ರಮವಹಿಸುವುದು.

21. ಕೊಠಡಿ ಮೇಲ್ವಿಚಾರಕರು ತಮ್ಮ ಮೇಜಿನ ಮೇಲೆ ಸ್ಯಾನಿಟೈಸರ್ ಹೊಂದಿರಬೇಕು ಹಾಗೂ ಪ್ರಶ್ನೆಪತ್ರಿಕೆಗಳನ್ನು ಮತ್ತು ಉತ್ತರ ಪತ್ರಿಕೆಗಳನ್ನು ತೆರೆಯುವ ಮತ್ತು ವಿತರಿಸುವ ಮೊದಲು ಅದನ್ನು ಬಳಸಬೇಕು. ಅಲ್ಲದೇ ಪರೀಕ್ಷೆಯ ಸಂಪೂರ್ಣ ಪ್ರಕ್ರಿಯೆಯಲ್ಲಿ ಅರ್ಧ ಗಂಟೆಗೊಮ್ಮೆ ಅಥವಾ ಯಾವುದೇ ವಸ್ತುಗಳ ಮೇಲ್ಮೈಯನ್ನು ಸ್ಪರ್ಶಿಸಿದಾಗ ಕೈಗಳನ್ನು ಪದೇಪದೇ ಸ್ಯಾನಿಟೈಸ್ ಮಾಡಿಕೊಳ್ಳಬೇಕು.

22. ಪರೀಕ್ಷಾ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸುವ ಎಲ್ಲಾ ಅಧಿಕಾರಿಗಳು/ಸಿಬ್ಬಂದಿಗಳು ಮುಖಗವಸು (Face Mask) ಧರಿಸುವುದು ಕಡ್ಡಾಯವಾಗಿರುತ್ತದೆ. ಸಿಬ್ಬಂದಿಗಳು ಪರೀಕ್ಷಾ ಕೇಂದ್ರದ ಆವರಣ ಪ್ರವೇಶಿಸುವಾಗ ಥರ್ಮಲ್ ಸ್ಕ್ಯಾನರ್ ಮೂಲಕ ತಾಪವನ್ನು ಪರೀಕ್ಷಿಸುವುದು. ಒಂದು ವೇಳೆ ಹೆಚ್ಚಿನ ತಾಪ ಕಂಡು ಬಂದಲ್ಲಿ ಅಂತಹವರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸುವುದು.

23. ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿಸಿಕೊಂಡ ಸಿಬ್ಬಂದಿಗಳು ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಲು ಕ್ರಮವಹಿಸುವುದು.

24. ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಅಗತ್ಯವಿರುವ ಅಭ್ಯರ್ಥಿಗಳ ಸಂಖ್ಯೆಗನುಗುಣವಾಗಿ ಸ್ಯಾನಿಟೈಸರನ್ನು ಲಭ್ಯಗೊಳಿಸುವುದು. ಪ್ರತಿ ಅಭ್ಯರ್ಥಿ ಮತ್ತು ಸಿಬ್ಬಂದಿಗಳು ತಮ್ಮ ಕೈಗಳನ್ನು ಸ್ಯಾನಿಟೈಸ್ ಮಾಡಿಕೊಳ್ಳುವಂತೆ ನೋಡಿಕೊಳ್ಳುವುದು.

25. ಪರೀಕ್ಷಾ ಕೇಂದ್ರಗಳಲ್ಲಿ ಅಗತ್ಯ ಪೊಲೀಸ್ ಬಂದೋಬಸ್ತ್ ಏರ್ಪಾಡು ಮಾಡಲು ಕ್ರಮವಹಿಸುವುದು. ಈ ಬಗ್ಗೆ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಡಯಟ್ ಪ್ರಾಂಶುಪಾಲರು ನಿಮ್ಮ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಯವರನ್ನು ಖುದ್ದು ಭೇಟಿ ಮಾಡಿ ಮನವಿ ಸಲ್ಲಿಸಿ ಅಗತ್ಯ ಕ್ರಮ ಕೈಗೊಳ್ಳುವುದು.

26. ಪರೀಕ್ಷೆಯ ನಂತರ ಅಭ್ಯರ್ಥಿಗಳು ಗುಂಪು ಗುಂಪಾಗಿ ಹೊರಹೋಗಲು ಬಿಡಬಾರದು ವಿದ್ಯಾರ್ಥಿಗಳು ಒಬ್ಬೊಬ್ಬರಾಗಿ ದೈಹಿಕ ಅಂತರವನ್ನು ಕಾಯ್ದುಕೊಂಡು ಹೊರಹೋಗುವಂತೆ ಕ್ರಮವಹಿಸುವುದು.

27. ಪ್ರತಿ ಪರೀಕ್ಷಾ ಕೇಂದ್ರದಲ್ಲಿ 10ಕ್ಕಿಂತ ಹೆಚ್ಚು ಕೊಠಡಿಗಳು ಇದ್ದಲ್ಲಿ ಕೊಠಡಿ ಮೇಲ್ವಿಚಾರಕರಾಗಿ ಹಾಗೂ ರಿಲೀವರ್ ಆಗಿ ಕಾರ್ಯನಿರ್ವಹಿಸುವ ಶಿಕ್ಷಕರುಗಳನ್ನು ಹೊರತುಪಡಿಸಿ ಒಬ್ಬರು ಹೆಚ್ಚುವರಿ ಕೊಠಡಿ ಮೇಲ್ವಿಚಾರಕರನ್ನು ತುರ್ತು ಸಂದರ್ಭಗಳಿಗಾಗಿ ನೇಮಕಾತಿ ಮಾಡಿಕೊಂಡು ಪರೀಕ್ಷಾ ಕೇಂದ್ರಗಳಲ್ಲಿ ಕಾಯ್ದಿರಿಸಿಕೊಳ್ಳುವುದು.

ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರುಗಳು ಹಾಗೂ ಪರೀಕ್ಷಾ ಕಾರ್ಯಕ್ಕೆ ನಿಯೋಜನೆಗೊಂಡ ಅಧಿಕಾರಿಗಳ ಸಭೆ ಕರೆದು ಮೇಲ್ಕಂಡ ವಿಷಯಗಳ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಮ್ಮ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸುವುದು.

**ವಿಶೇಷ ಸೂಚನೆ:-**

ಇತರೆ ಪರೀಕ್ಷೆಗಳ ವಿಭಾಗದಿಂದ ನಡೆಯುವ ಪರೀಕ್ಷಾ ಪ್ರಕ್ರಿಯೆಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಯ ಜಿಲ್ಲಾ/ತಾಲ್ಲೂಕು ಪರೀಕ್ಷಾ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿ/ಸಿಬ್ಬಂದಿಗಳಿಗೆ ಆಯಾ ಜಿಲ್ಲೆಯ ಪ್ರಾಂಶುಪಾಲರು/ಉಪನಿರ್ದೇಶಕರು (ಅಭಿವೃದ್ಧಿ), ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲೆ ವಿವರಿಸಿರುವ ಅಂಶಗಳ ಬಗ್ಗೆ ವಿವರವಾದ ತರಬೇತಿಯನ್ನು ಪರೀಕ್ಷಾ ಪೂರ್ವದಲ್ಲಿ ತಪ್ಪದೇ ನೀಡುವುದು ಹಾಗೂ ಪ್ರತಿ ಪರೀಕ್ಷಾ ಕೇಂದ್ರದಲ್ಲೂ ಈ ಕ್ರಮವನ್ನು ಅನುಷ್ಠಾನಗೊಳಿಸಲು ತರಬೇತಿಯನ್ನು ಪರೀಕ್ಷಾ ಪೂರ್ವದಲ್ಲಿ ತಪ್ಪದೇ ನೀಡುವುದು ಹಾಗೂ ಪ್ರತಿ ಪರೀಕ್ಷಾ ಕೇಂದ್ರದಲ್ಲಿಯೂ ಮಾಡಿಕೊಂಡಿರುವ ಸಿದ್ಧತೆಗಳನ್ನು ಪರೀಕ್ಷಾ ಪೂರ್ವದಲ್ಲಿ ಪರಿಶೀಲಿಸಿ ದೃಢೀಕರಿಸಿಕೊಳ್ಳುವುದು. ಈ ಬಗ್ಗೆ ಜಿಲ್ಲಾಧಿಕಾರಿಗಳು, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮೇಲುಸ್ತುವಾರಿಯನ್ನು ವಹಿಸುವುದು.

ಪರೀಕ್ಷಾ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಲಸಿಕೆ ಹಾಕಿಸಿಕೊಂಡಿರುವುದನ್ನು ಖಾತ್ರಿಪಡಿಸಿಕೊಳ್ಳುವುದು ಆಪೇಕ್ಷಣೀಯ.

(ಮಾನ್ಯ ಆಯುಕ್ತರ ಅನುಮೋದನೆ ಮೇರೆಗೆ)

[ಎಸ್. ಗೀತಾ]
ನಿರ್ದೇಶಕರು
ಇತರೆ ಪರೀಕ್ಷೆಗಳು

ಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ, ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್‌ರವರಿಗೆ ಅಗತ್ಯ ಕ್ರಮಕ್ಕಾಗಿ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಹಾಗೂ ಕಲ್ಬುರ್ಗಿ ವಿಭಾಗ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಡಯಟ್ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ.
5. ಸಂಬಂಧಿಸಿದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.
6. ಸಂಬಂಧಿಸಿದ ಎಲ್ಲಾ ಪರೀಕ್ಷಾ ನೋಡಲ್ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.

<u>ಪ್ರತಿಯನ್ನು:</u>

1. ಸರ್ಕಾರದ ಮಾನ್ಯ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ)ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಕಛೇರಿ ಪ್ರತಿ.